ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

ಶ್ರೀ ಎಸ್. ವಿ. ಸಂಕನೂರ(ಪದವೀಧರರ ಕ್ಷೇತ್ರ) -

471 (584) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 5 ವರ್ಷಗಳಲ್ಲಿ ರಾಜ್ಯಾದ್ಯಂತ ಸ್ಥಾಪಿಸಲಾಗಿರುವ ಒಟ್ಟು ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಕುಡಿಯುವ ನೀರಿನ ಘಟಕಗಳನ್ನು ನಿರ್ವಹಿಸಲು ಯಾವ ಖಾಸಗಿ ಕಂಪನಿಯವರಿಗೆ ವಹಿಸಲಾಗಿದೆ ಮತ್ತು ಈ ಯೋಜನೆಯಲ್ಲಿ ಬಿಡುಗಡೆಯಾದ ಒಟ್ಟು ಅನುದಾನ ಎಷ್ಟು; (ಖರ್ಚಾದ ಮತ್ತು ಬಾಕಿ ಉಳಿದಿರುವ ಅನುದಾನದ ವಿವರ ನೀಡುವುದು)

(ಇ) ರಾಜ್ಯಾದ್ಯಂತ ಇಲ್ಲಿಯವರೆಗೆ ಸ್ಥಗಿತಗೊಂಡಿರುವ ಒಟ್ಟು ಶುದ್ಧ ನೀರಿನ ಘಟಕಗಳ ಸಂಖ್ಯೆ ಎಷ್ಟು; ಇವುಗಳ ದುರಸ್ಥಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವ ಯೋಜನೆಯಲ್ಲಿ ಅವ್ಯವಹಾರಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)